ಸ್ವಚ್ಛ ಗ್ರಾಮ ಯೋಜನೆಯಡಿ ರಸ್ತೆ, ಕೊಳೆ ಮತ್ತು ಮಳೆ ನೀರಿನ ಚರಂಡಿಗಳು, ವೈಯಕ್ತಿಕ ಕೌಟುಂಬಿಕ ಶೌಚಾಲಯಗಳು, ಶಾಲಾ ಶೌಚಾಲಯ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲಾಗುತ್ತದೆ. ಹಾಗೂ ಎಲ್ಲಾ ಮನೆಗಳಿಗೆ ಹೊಗೆರಹಿತ ಒಲೆಗಳನ್ನು ಒದಗಿಸಲು ಉದ್ದೇಶಿಸಿದೆ ಅಲ್ಲದೆ, ಸಾಮೂಹಿಕ ಮಿಶ್ರ ಗೊಬ್ಬರದ ಅಂಗಳವನ್ನು ನಿರ್ಮಿಸಿ, ಗ್ರಾಮದ ವಾಸಸ್ಥಳದಿಂದ ತಿಪ್ಪೆಗುಂಡಿಗಳನ್ನು ತೆಗೆದುಹಾಕಲು ಉದ್ದೇಶಿಸಿದೆ.

ಧರ್ಮಸ್ಥಳದ ಆರೋಗ್ಯ ಕೇಂದ್ರಕ್ಕೆ ಸಿಬ್ಬಂದಿ ವರ್ಗ ನೇಮಕ

514(779) -ಶ್ರೀ ಪ್ರಭಾಕರ ಬಂಗೇರ ಕೆ. (ಬೆಳ್ತಂಗಡಿ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಧರ್ಮಸ್ಥಳ ಆರೋಗ್ಯ ಕೇಂದ್ರವನ್ನು ಮೇಲ್ದರ್ಜೆಗೆ ಏರಿಸಿ ಅದಕ್ಕೆ ಬೇಕಾಗುವ ಸಿಬ್ಬಂದಿ ವರ್ಗವನ್ನು ನಿಯೋಜಿಸಲಾಗಿದೆಯೇ;

ಆ) ಹೌದಾದಲ್ಲಿ ಅದರ ಕಾರ್ಯಾರಂಭವನ್ನು ಯಾವಾಗ ಮಾಡಲಾಗುವುದು?

ಶ್ರೀ ಕಾಗೋಡು ತಿಮ್ಮಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ಮೇಲ್ದರ್ಜೆಗೇರಿಸುವುದಿಲ್ಲ.

ಆ) ಅನ್ವಯಿಸುವುದಿಲ್ಲ.

ಬೆಳ್ತಂಗಡಿ ತಾಲ್ಲೂಕಿನ ಪ್ರೌಢ ಶಾಲೆಗಳಲ್ಲಿ ಶಿಕ್ಷಕರ ಕೊರತೆ

515(780) -ಶ್ರೀ ಪ್ರಭಾಕರ ಬಂಗೇರ ಕೆ. (ಬೆಳ್ತಂಗಡಿ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳ್ತಂಗಡಿ ತಾಲ್ಲೂಕಿನಲ್ಲಿನ ಹಿರಿಯ ಕಿರಿಯ ಮತ್ತು ಪ್ರೌಢಶಾಲೆಗಳಲ್ಲಿ ಮಂಜೂರಾದ ಶಿಕ್ಷಕರ ಹುದ್ದೆಗಳಲ್ಲಿ ಕೊರತೆ ಇರುವ ಶಿಕ್ಷಕರ ಹುದ್ದೆಗಳೆಷ್ಟು; ಯಾವಾಗ ಅವುಗಳನ್ನು ಭರ್ತಿ ಮಾಡಲಾಗುವುದು;

ಆ) ಶಿಕ್ಷಕರ ನೇಮಕಾತಿ ಪ್ರಕ್ರಿಯೆಗೆ ನ್ಯಾಯಾಲಯವು ತಡೆಯಾಜ್ಞೆ ನೀಡಿರುವುದನ್ನು ತೆರವುಗೊಳಿಸಲು ಸರ್ಕಾರದವರು ಕೈಗೊಂಡ ಕ್ರಮಗಳೇನು;

ಇ) ವಿದ್ಯಾರ್ಥಿಗಳ ಹೆಚ್ಚಳದಿಂದ ಉಂಟಾಗಿರುವ ಕೊಠಡಿಗಳ ಸಮಸ್ಯೆಯನ್ನು ನಿವಾರಿಸಲು ಸೂಕ್ತ ಪ್ರಮಾಣದ ಅನುದಾನವನ್ನು ಬಿಡುಗಡೆ ಮಾಡಲಾಗುವುದೆ;

ಈ) ನೂರು ವರ್ಷಗಳಿಗೂ ಹಳೆಯದಾಗಿದ್ದು ಇನ್ನೂ ಅದೇ ಶಿಥಿಲಾವಸ್ಥೆಯಲ್ಲಿರುವ ಶಾಲೆಗಳನ್ನು ನವೀಕರಣಗೊಳಿಸಲು ಹಾಗೂ ಅದ್ಯಕ್ಷ ಸೂಕ್ತ ಅನುದಾನ ನೀಡಲು ಸರ್ಕಾರವು ಕ್ರಮ ಜರುಗಿಸುವರೆ; ಆ ಕುರಿತು ಸರ್ಕಾರದ ಯೋಜನೆಗಳೇನು?